ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ,
ನೃಪತುಂಗ ರಸ್ತೆ, ಬೆಂಗಳೂರು-560 001

ಸಂಖ್ಯೆ : ಸಿ1(4)ಬಿ.ಆರ್.ಪಿ.ಹು.ಭ/07/2011-12 ದಿನಾಂಕ : 17-05-2011

## ಸೂಚನೆ

ವಿಷಯ :- ಕ್ಷೇತ್ರ ಸಂಪನ್ಮೂಲ ಕೇಂದ್ರಗಳಿಗೆ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ :- ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ : ಸಶಿಅ/ಶೈತ/ಸಿ1(1)/ಬಿಆರ್‌ಸಿ/2010-11 ದಿನಾಂಕ : 20-04-2011.

* * * * * *

ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ರವರ ಉಲ್ಲೇಖಿತ ಆದೇಶದನ್ವಯ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ : 22-05-2011 ರಂದು ಸಮಯ ಬೆಳಿಗ್ಗೆ 10.30 ರಿಂದ 12.00 ಘಂಟೆಯವರೆವಿಗೆ ವಿಭಾಗವಾರು ಲಿಖಿತ ಪರೀಕ್ಷೆಯನ್ನು ನಡೆಸಬೇಕಾಗಿದ್ದು, ಬೆಂಗಳೂರು ಮತ್ತು ಮೈಸೂರು ವಿಭಾಗದಡಿ ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ ಕಛೇರಿಯುಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ಆಯ್ಕೆ ಮಾಡಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ವಿಭಾಗ | ಪರೀಕ್ಷಾ ಕೇಂದ್ರ |
|---|---|---|
| 1 | ಬೆಂಗಳೂರು | ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಜಾಜಿನಗರ, ಬೆಂಗಳೂರು |
| 2 | ಮೈಸೂರು | ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ವಸಂತ ಮಹಲ್, ಮೈಸೂರು |

1) ಲಿಖಿತ ಪರೀಕ್ಷೆಗೆ ಅರ್ಹರಿರುವ ಅಧಿಕಾರಿಗಳ ಹಾಗೂ ಅರ್ಹರಿಲ್ಲದೇ ಇರುವ ಅಧಿಕಾರಿಗಳ ಪಟ್ಟಿಯನ್ನು ಈ ಕೆಳಕಂಡ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಇಲಾಖಾ ವೆಬ್ ಸೈಟ್ ವಿವರ www.schooleducation.kar.nic.in/whatsnew.htm

2) ಅರ್ಹ ಅಧಿಕಾರಿಗಳಿಗೆ ಪರೀಕ್ಷಾ ಪ್ರವೇಶ ಪತ್ರವನ್ನು ಜಿಲ್ಲಾ ಉಪ ನಿರ್ದೇಶಕರುಗಳಿಗೆ ಕಳುಹಿಸಲಾಗಿದ್ದು, ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರುಗಳಿಂದ ಪ್ರವೇಶ ಪತ್ರಗಳನ್ನು ಅರ್ಹ ಅಧಿಕಾರಿಗಳು ಪಡೆದುಕೊಂಡು ಪರೀಕ್ಷಾ ಕೇಂದ್ರದಲ್ಲಿ ಹಾಜರುಪಡಿಸುವುದು.

3) ಒಂದು ವೇಳೆ ನಿಗಧಿತ ಅವಧಿಯಲ್ಲಿ ಅರ್ಹ ಅಧಿಕಾರಿಗಳು ಪ್ರವೇಶ ಪತ್ರಗಳನ್ನು ಪಡೆದುಕೊಳ್ಳದಿದ್ದಲ್ಲಿ ಸದರಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿರುವ ಕಛೇರಿಯ

ನಿಯಂತ್ರಣಾಧಿಕಾರಿಗಳಿಂದ ಛಾಯಾ ಚಿತ್ರವನ್ನು ದೃಢೀಕರಿಸಿರುವ ಸೇವಾ ಪ್ರಮಾಣ ಪತ್ರವನ್ನು ಪಡೆದುಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು.

(ವಿ.ಬಿ. ಪಾಟೀಲ)
ಜಂಟಿ ನಿರ್ದೇಶಕರು(ಆಡಳಿತ) (ಹೇ.ಪ್ರ)
ಆಯುಕ್ತರ ಪರವಾಗಿ

ಗೆ,

ಕ್ಷೇತ್ರ ಸಂಪನ್ಮೂಲ ಕೇಂದ್ರಗಳಿಗೆ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ನಡೆಸುವ ಲಿಖಿತ ಪರೀಕ್ಷೆಗೆ ಅರ್ಜಿಯನ್ನು ಸಲ್ಲಿಸಿರುವ ಅಧಿಕಾರಿಗಳ ಗಮನಕ್ಕಾಗಿ.